# ಕರ್ನಾಟಕ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 158(176)

ಸದಸ್ಯರ ಹೆಸರು : ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿತರಾದವರು)

ಉತ್ತರಿಸಬೇಕಾದ ದಿನಾಂಕ : 09.12.2025

ಉತ್ತರಿಸುವವರು : ಪೌರಾಡಳಿತ ಮತ್ತು ಹಜ್ ಸಚಿವರು

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಸಿಂಧನೂರು ನಗರಸಭೆಯು 31 ವಾರ್ಡ್‌ಗಳನ್ನು ಹೊಂದಿದ್ದು, ಹೆಚ್ಚಿನ ಜನಸಂಖ್ಯೆಯನ್ನು ಹೊಂದಿರುವುದರಿಂದ ನಗರಸಭೆಯಲ್ಲಿನ ಪೌರಕಾರ್ಮಿಕರ ಕೊರತೆಯಿಂದಾಗಿ ನಗರದಲ್ಲಿ ಸ್ವಚ್ಛತೆಯಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ಸರ್ಕಾರದ ಆದೇಶ ಸಂಖ್ಯೆ: ನಅಇ 126 ಟಿಎಂಎಸ್ 2016, ದಿನಾಂಕ: 07.08.2017 ರಲ್ಲಿ ಸ್ವಚ್ಛತಾ ಕಾರ್ಯಕ್ಕೆ ಪೌರಕಾರ್ಮಿಕರನ್ನು ಹೊರಗುತ್ತಿಗೆ ಮೂಲಕ ಪಡೆಯುವುದನ್ನು ರದ್ದುಪಡಿಸಿ, 700 ಜನಸಂಖ್ಯೆಗೆ ಒಬ್ಬ ಪೌರಕಾರ್ಮಿಕರನ್ನು ನಿಗಧಿಪಡಿಸಲಾಗಿರುತ್ತದೆ. ಅದರಂತೆ ಸಿಂಧನೂರು ನಗರಸಭೆಗೆ 126 ಪೌರಕಾರ್ಮಿಕರ ಹುದ್ದೆ ಮಂಜೂರಾಗಿರುತ್ತದೆ. |
| ಆ) | ಬಂದಿದ್ದಲ್ಲಿ, ಸರ್ಕಾರವು ಸಿಂಧನೂರು ನಗರಸಭೆಗೆ ಮಂಜೂರು ಮಾಡಿರುವ ಪೌರಕಾರ್ಮಿಕರ ಹುದ್ದೆಗಳ ಸಂಖ್ಯೆ ಎಷ್ಟು: | ಪೌರಸೇವಾ ವೃಂದದ ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ಪೌರಕಾರ್ಮಿಕರ ಹುದ್ದೆಗಳನ್ನು ನಗರಸಭೆಗಳಿಗೆ ಶೇ. 50 ರಷ್ಟು ನೇರನೇಮಕಾತಿ ಹಾಗೂ ಶೇ. 50 ರಷ್ಟು ನೇರಪಾವತಿ ಮೂಲಕ ಭರ್ತಿ ಮಾಡಲು ಅವಕಾಶ ಕಲ್ಪಿಸಲಾಗಿರುತ್ತದೆ.<br>ಅದರನ್ವಯ ಸಿಂಧನೂರು ನಗರಸಭೆಗೆ ಮಂಜೂರಾದ ಒಟ್ಟು 126 ಹುದ್ದೆಗಳ ಪೈಕಿ 63 ಹುದ್ದೆಗಳು ನೇರ ನೇಮಕಾತಿಯಡಿ ಹಾಗೂ 63 ಹುದ್ದೆಗಳು ನೇರಪಾವತಿಯಡಿಯಲ್ಲಿ ಭರ್ತಿ ಮಾಡಲು ಮಂಜೂರಾಗಿರುತ್ತವೆ. |
| ಇ) | ಮಂಜೂರಾದ ಹುದ್ದೆಯಲ್ಲಿ ಪೌರಕಾರ್ಮಿಕರ ಹುದ್ದೆಗಳು ಖಾಲಿಯಿರುವ ಸಂಖ್ಯೆ ಎಷ್ಟು | ಸಿಂಧನೂರು ನಗರಸಭೆಯಲ್ಲಿ ಮಂಜೂರಾದ 126 ಹುದ್ದೆಗಳ ಪೈಕಿ 58 ಖಾಯಂ ಪೌರಕಾರ್ಮಿಕರು ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಮುಂದುವರೆದು, ನೇರ ನೇಮಕಾತಿಯಡಿ 05 ಹಾಗೂ ನೇರ ಪಾವತಿಯಡಿಯಲ್ಲಿ 63 ಹುದ್ದೆಗಳು; ಒಟ್ಟಾರೆಯಾಗಿ 68 ಹುದ್ದೆಗಳು ಖಾಲಿ ಇರುತ್ತವೆ. |
| ಈ) | ಸದರಿ ಖಾಲಿ ಪೌರಕಾರ್ಮಿಕರ ಹುದ್ದೆಗಳನ್ನು ಸರ್ಕಾರ ಯಾವ ಕಾಲಮಿತಿಯೊಳಗೆ ಭರ್ತಿ ಮಾಡಲು ಕ್ರಮಕೈಗೊಳ್ಳುವುದು: | ಸರ್ಕಾರದ ಆದೇಶ ಸಂಖ್ಯೆ: ನಅಇ 57 TMS 2024 (ಇ), ದಿನಾಂಕ: 27.09.2024ರಲ್ಲಿ ನೇರ ಪಾವತಿಯಡಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಪೌರಕಾರ್ಮಿಕರನ್ನು ಖಾಯಂಗೊಳಿಸಲು 1100 ಹುದ್ದೆಗಳನ್ನು ಹಂಚಿಕೆ ಮಾಡಲಾಗಿರುವಂತೆ ಪೌರಾಡಳಿತ ನಿರ್ದೇಶನಾಲಯದ ಆದೇಶ ದಿನಾಂಕ: 23.10.2024 ರಲ್ಲಿ ಸಿಂಧನೂರು ನಗರಸಭೆಗೆ 06 ಹುದ್ದೆಗಳನ್ನು ಹಂಚಿಕೆ ಮಾಡಿ ಜಿಲ್ಲಾಧಿಕಾರಿಗಳ ಹಂತದಲ್ಲಿ ನೇಮಕಾತಿಗೆ ಕ್ರಮಕೈಗೊಳ್ಳಲು ನಿರ್ದೇಶನ ನೀಡಲಾಗಿರುತ್ತದೆ. |

| | | |
|---|---|---|
| | | ಪೌರಾಡಳಿತ ನಿರ್ದೇಶನಾಲಯದ ಸುತ್ತೋಲೆ ದಿನಾಂಕ: 18.11.2025 ರಲ್ಲಿ ರಾಜ್ಯದ ನಗರಸಭೆಗಳಲ್ಲಿ ನೇರ ಪಾವತಿಯಡಿಯಲ್ಲಿ ಖಾಲಿಯಿರುವ ಪೌರಕಾರ್ಮಿಕರ ಹುದ್ದೆಗಳನ್ನು ಭರ್ತಿ ಮಾಡಲು ಎಲ್ಲಾ ಜಿಲ್ಲಾಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದೆ. |
| **ಉ)** | ನಗರವು ದಿನೇ ದಿನೇ ಬೆಳೆಯುತ್ತಿದ್ದು, ಸ್ವಚ್ಛತೆಯನ್ನು ಕಾಪಾಡುವ ನಿಟ್ಟಿನಲ್ಲಿ ಹೆಚ್ಚುವರಿಯಾಗಿ 100 ಪೌರಕಾರ್ಮಿಕ ಹುದ್ದೆಗಳನ್ನು ಸರ್ಕಾರವು ಮಂಜೂರು ಮಾಡುವುದೇ? | ಸರ್ಕಾರದ ಆದೇಶ ಸರ್ಕಾರದ ಆದೇಶ ಸಂಖ್ಯೆ: ನಅಇ 126 ಟಿಎಂಎಸ್ 2016, ದಿನಾಂಕ: 07.08.2017 ರಲ್ಲಿ 700 ಜನಸಂಖ್ಯೆಗೆ ಒಬ್ಬ ಪೌರಕಾರ್ಮಿಕರನ್ನು ನಿಗಧಿಪಡಿಸಲಾಗಿರುವಂತೆ ಸಿಂಧನೂರು ನಗರಸಭೆಗೆ 126 ಪೌರಕಾರ್ಮಿಕರು ಹುದ್ದೆಗಳು ಮಂಜೂರಾಗಿರುತ್ತವೆ. ಹೆಚ್ಚುವರಿಯಾಗಿ ಪೌರಕಾರ್ಮಿಕ ಹುದ್ದೆಗಳನ್ನು ಮಂಜೂರು ಮಾಡಲು ನಿಯಮಗಳಲ್ಲಿ ಅವಕಾಶವಿಲ್ಲ. |

**ಇ-ಸಂಖ್ಯೆ: ನಅಇ 287 ಜಿಇಎಲ್ 2025**

**(ರಹೀಂ ಖಾನ್)**

ಪೌರಾಡಳಿತ ಮತ್ತು ಹಜ್ ಸಚಿವರು.